# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:46:ಗ್ರಾವಿಯೋ:2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 21.06.2016

## ಸುತ್ತೋಲೆ

ವಿಷಯ: ಗ್ರಾಮ ವಿಕಾಸ ಯೋಜನೆ ಅಭಿವೃದ್ಧಿ ಕಾಮಗಾರಿಗಳ ಮೇಲ್ವಿಚಾರಣೆ ಮತ್ತು ಉಸ್ತುವಾರಿಗೆ ನೋಡಲ್ ಅಧಿಕಾರಿಗಳನ್ನು ನೇಮಿಸಿ ಕಾರ್ಯಕ್ರಮವನ್ನು ಸಕಾಲದಲ್ಲಿ ಪೂರ್ಣಗೊಳಿಸುವ ಕುರಿತು.

ಉಲ್ಲೇಖ: ಗ್ರಾಮ ವಿಕಾಸ ಯೋಜನೆ ಮಾರ್ಗಸೂಚಿ.

***

ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಗೊಂಡ ಗ್ರಾಮಗಳಿಗೆ ತ್ರೈಮಾಸಿಕ ಕಂತುಗಳಲ್ಲಿ ಅನುದಾನ ಬಿಡುಗಡೆಗೊಳಿಸಲಾಗಿದ್ದು, ಸಂಬಂಧಪಟ್ಟ ಗ್ರಾಮ ಪಂಚಾಯತಿಗಳು ಅಭಿವೃದ್ಧಿ ಕಾಮಗಾರಿಗಳನ್ನು ಮಾರ್ಗಸೂಚಿಯಲ್ಲಿ ಅವಕಾಶ ಕಲ್ಪಿಸಿದಂತೆ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡು ಅನುಮೋದನೆಯ ನಂತರ ಅನುಷ್ಠಾನ ಸಂಸ್ಥೆಗಳ ಮೂಲಕ ಕೈಗೊಂಡಿರುವುದು ಸರಿಯಷ್ಟೆ.

1. ಗ್ರಾಮ ವಿಕಾಸ ಯೋಜನೆಯನ್ನು ಸಕಾಲದಲ್ಲಿ ಯೋಜನೆಯನ್ನು ಕಾರ್ಯ ರೂಪಕ್ಕೆ ತರಲು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

    - ಜಿಲ್ಲಾ ಮಟ್ಟದಲ್ಲಿ ಯೋಜನೆಯನ್ನು ಉಸ್ತುವಾರಿ ಮಾಡಲು ಅಧಿಕಾರಿಯೊಬ್ಬರನ್ನು ನೋಡಲ್ ಅಧಿಕಾರಿ ಎಂದು ನಿಯೋಜಿಸಬೇಕು ಮತ್ತು
    - ನೋಡಲ್ ಅಧಿಕಾರಿಯು ಯೋಜನೆ ಕಾಮಗಾರಿಗಳ ಗುಣಮಟ್ಟ / ಪ್ರಗತಿಯನ್ನು ನಿರಂತರವಾಗಿ ಪರಿಶೀಲಿಸುವುದು ಮತ್ತು ಯೋಜನೆಯ ಅನುಷ್ಠಾನದಲ್ಲಿ ಕೆ.ಟಿ.ಪಿ.ಪಿ ನಿಯಮಗಳ ಪಾಲನೆಗೆ ಅಗತ್ಯ ಮಾರ್ಗದರ್ಶನ ಮತ್ತು ಕ್ರಮವನ್ನು ವಹಿಸಬೇಕು.
    - ಸಕಾಲದಲ್ಲಿ ಯೋಜನೆಯನ್ನು ಅನುಷ್ಠಾನ ಮಾಡಲು ಮೇಲ್ವಿಚಾರಣೆ ಮಾಡುವುದು. ಹಾಗೂ ತಾಲ್ಲುಕು ಮಟ್ಟದಿಂದ ಪ್ರಗತಿ ವರದಿಯನ್ನು ಸಂಗ್ರಹಿಸಿ ಜಿಲ್ಲಾ ಪಂಚಾಯತ್ ಮೂಲಕ ಸರ್ಕಾರಕ್ಕೆ ಸಲ್ಲಿಸಲು ಕ್ರಮ ವಹಿಸಲು ಸೂಚಿಸುವುದು.

2. ಹಾಗೆಯೇ ಸಂಬಂಧಪಟ್ಟ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು

    - ತಾಲ್ಲೂಕು ಮಟ್ಟದಲ್ಲಿ ಯೋಜನೆಯ ಉಸ್ತುವಾರಿಗಾಗಿ ಗ್ರಾಮವೊಂದಕ್ಕೆ ನೋಡಲ್ ಅಧಿಕಾರಿಯನ್ನು ನೇಮಿಸಿ, ಕಾಮಗಾರಿಗಳು ಗುಣಮಟ್ಟದಲ್ಲಿ ಮತ್ತು ಕಾಲಮಿತಿಯಲ್ಲಿ ಅನುಷ್ಠಾನಗೊಳ್ಳುವಂತೆ ಮತ್ತು
    - ಅನುಷ್ಠಾನ ಸಂಸ್ಥೆಗಳಿಗೆ ನಿಯಮಾನುಸಾರ ಹಣವನ್ನು ವಿಳಂಭವಿಲ್ಲದೆ ಪಾವತಿಸುವಂತೆ ಕ್ರಮ ವಹಿಸುವುದು.

- ಕಾಮಗಾರಿಗಳ ಪ್ರಗತಿ ಪರಿಶೀಲನೆ ಮಾಡಿ ಪ್ರಗತಿಯ ವರದಿಯನ್ನು ಮತ್ತು ಹಣ ಉಪಯುಕ್ತಾತಾ ಪತ್ರವನ್ನು ಸಕಾಲದಲ್ಲಿ ಜಿಲ್ಲಾ ಪಂಚಾಯತ್ ಗೆ ಸಲ್ಲಿಸಲು ಅನುಕೂಲವಾಗುವಂತೆ ಕ್ರಮ ವಹಿಸಲು ಸೂಚಿಸುವುದು.

3. ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ವಿಕಾಸ ಯೋಜನೆಯ ಅನುಷ್ಠಾನದ ಹೊಣೆ ಹೊತ್ತಿರುವ ಗ್ರಾಮ ಪಂಚಾಯಿತಿಗಳಿಗೆ

- ಶಾಸಕರ ಅಧ್ಯಕ್ಷತೆಯಲ್ಲಿನ ಉಸ್ತುವಾರಿ ಸಮಿತಿ ಸಭೆಯನ್ನು ಕಾಲಕಾಲಕ್ಕೆ ನಡೆಸುವಂತೆ ಮತ್ತು
- ಕಾಮಗಾರಿಗಳನ್ನು ಮಾರ್ಗಸೂಚಿಯಂತೆ ಕಾಲಮಿತಿಯಲ್ಲಿ ಕೈಗೊಂಡು ಯೋಜನೆಯನ್ನು ಪೂರ್ಣಗೊಳಿಸಲು ಹಾಗೂ
- ಪ್ರಗತಿಯ ವಿವರಗಳನ್ನು ಮತ್ತು ಹಣ ಉಪಯುಕ್ತತಾ ಪತ್ರವನ್ನು ತಾಲ್ಲೂಕು ಪಂಚಾಯಿತಿಯ ಮೂಲಕ ಜಿಲ್ಲಾ ಪಂಚಾಯತ್‌ಗೆ ಸಲ್ಲಿಸುವಂತೆ ಕ್ರಮ ಕೈಗೊಳ್ಳಲು ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸುವುದು.

21/6/16

(ಬೂವನಹಳ್ಳಿನಾಗರಾಜ್)
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು ಕ್ರಮಕ್ಕಾಗಿ.

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಮುಖ್ಯ ಇಂಜಿನಿಯರ್, ಪಂ ರಾಜ್ ಇಂಜಿನಿಯರಿಂಗ್ ವಿಭಾಗ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
4. ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು (ಸಂಬಂಧಪಟ್ಟ ಗ್ರಾಮ ಪಂಚಾಯಿತಿಯ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿಯ ಅಧಿಕಾರಿಗಳು / ಕಾರ್ಯದರ್ಶಿ ಗೆ ಪ್ರತಿಯನ್ನು ಮಾಹಿತಿಗೆ ತಲುಪಿಸುವುದು)
5. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.
6. ವೈಬ್‌ಸೈಟ್/ಮಾಹಿತಿಕೇಂದ್ರ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ವೈಬ್‌ಸೈಟ್‌ನಲ್ಲಿ ಅಳವಡಿಸಲು.

ಪ್ರತಿಯನ್ನು ಮಾಹಿತಿಗಾಗಿ.

1. ಮಹಾಲೇಖಪಾಲರು (ಆಡಿಟ್-I & II), ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗಳ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.& ಪಂ.ರಾಜ್ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಆರ್ಥಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಯೋಜನಾ ಇಲಾಖೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ ಮತ್ತು ಪಂ ರಾಜ್ ಇಲಾಖೆ.
6. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿ.